ಮೈಸೂರ ಗೆಜೆಟ

ಸರ್ಕಾರದಿಂದ ಪ್ರಸಿದ್ಧ ಆದ್ದು.

ಬೆಂಗಳೂರು, ಶನಿವಾರ, ಜೂನ್ ತಾ|| 15, ಸನ್ 1889.

ಸೂಚನೆ ಈ ಭಾಗವನ್ನು ಪ್ರತ್ಯೇಕ ಕೀರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫೈನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಟೀನೆಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜೂ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಪ್ಯೂಪ್ಪಿಕೇಟೂದ ಡಿವಿಂಡ್ ವಾರಂಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೀನೆಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹರ್ಸ್,
ಕಾಂಪ್ಟ್ರೋಲರ್.

ಫಾರೆಸ್ಟ್ ಇಲಾಖೆ.

ತಾರೀಖು 22ನೇ ಮೇ 1889.

ಇದರಿಂದ ತಿಳಿಯಪಡಿಸುವದೇನಂದರೆ, ಈ ಕೆಳಗೆ ನಮೂದು ಮಾಡಲ್ಪಡುವ ಸ್ಥಳಗಳಲ್ಲಿ ಕಡೂರು ಡಿಸ್ಟ್ರಿಕ್ಟಿನ ಉತ್ಪತ್ತಿಯ ಮರವಗ್ಯೆರೆ ನಾಮೋನುಗಳು ಆಯಾ ತಾರೀಖಿನಲ್ಲಿ ಬಹಿರಂಗವಾಗಿ ಹರಾಜು ಹಾಕಲ್ಪಡುತ್ತೆ.

ಡಿಪೋ ಹೆಸರು.	ಹರಾಜಿನ ತಾರೀಖು.	ಸಾಗವಾನಿ ದೂಲ.	ಕಾಡುಮರದ ದೂಲ.	ಸಾಗವಾನಿ ಮತ್ತು ಕಾಡುಮರದ ಸರಗಳು.	ಬಿದರುಗಳು.	ಒತ್ತು.	ಷರಾ.
ತರೀಕೆರೆ ..	14ನೇ ಜೂನ್ 1889	0	300	500 (ಸಾಗವಾನಿ)	5000	5,800	ಹೆಚ್ಚು ವಕಡಿಮೆ
ಹಬೆ ..	21ನೇ ಡಿಟೋ	160	40	0	0	200	ಡಿಟೋ
ಲಕ್ಕುವಳ್ಳಿ ..	25ನೇ ಡಿಟೋ	600	200	100 (ಸಾಗವಾನಿ)	0	900	ಡಿಟೋ

ಷರತ್ತು—ಸನ್ 1887ನೇ ಇಸವಿ ಆಗಸ್ಟ್ 30ನೇ ತಾರೀಖಿನ ನಂಬರ್ 99ನೇ ದಿವಾನ್ ನಾಡಿಯರ ನೋಟಿಫಿಕೇಷನ್ ಅನುಸರಿ